| | ಕರ್ನಾಟಕ ಲೋಕಸೇವಾ ಆಯೋಗ |
|---|---|

PSC 1 RTB-1/2023 ದಿನಾಂಕ 14-05-2024

## ತಿದ್ದುಪಡಿ ಅಧಿಸೂಚನೆ

ಆಯೋಗದ ಅಧಿಸೂಚನೆ ಸಂಖ್ಯೆ ಪಿಎಸ್‌ಸಿ 1 ಆರ್‌ಟಿಬಿ-1/2023 ದಿನಾಂಕ 13-03-2024ರಲ್ಲಿ ವಿವಿಧ ಇಲಾಖೆಗಳಲ್ಲಿನ ವಿವಿಧ ಗ್ರೂಪ್-'ಬಿ' ವೃಂದದ 277 (RPC) ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಸದರಿ ಅಧಿಸೂಚನೆಯಲ್ಲಿನ ಜಲ ಸಂಪನ್ಮೂಲ ಇಲಾಖೆಯಲ್ಲಿ ಸಹಾಯಕ ಇಂಜಿನಿಯರ್ (ಸಿವಿಲ್) (ವಿಭಾಗ1) - 90 ಮತ್ತು ಸಹಾಯಕ ಇಂಜಿನಿಯರ್ (ಮೆಕ್ಯಾನಿಕಲ್) (ವಿಭಾಗ-1) 10 ಹುದ್ದೆಗಳಿಗೆ ಇಲಾಖೆಯ ಪ್ರಸ್ತಾವನೆಯಂತೆ ನಿಗದಿಪಡಿಸಲಾಗಿದ್ದ ವಿದ್ಯಾರ್ಹತೆಯ ಕೋರ್ಸ್ ಗಳಲ್ಲಿ ಕೇವಲ B.E ಪದವಿಗಳನ್ನು ಮಾತ್ರ ಪರಿಗಣಿಸಿ, ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಪ್ರಸ್ತುತ ಸರ್ಕಾರದ ಪತ್ರ ದಿನಾಂಕ 13.05.2024ರಲ್ಲಿ ಸದರಿ ಹುದ್ದೆಗಳಿಗೆ B.Tech ಪದವಿಯನ್ನು ಸಹ ಪರಿಗಣಿಸಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವಂತೆ ಕೋರಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಮೇಲ್ಕಂಡ ಅಧಿಸೂಚನೆಯಲ್ಲಿನ ಜಲ ಸಂಪನ್ಮೂಲ ಇಲಾಖೆಯಲ್ಲಿ ಸಹಾಯಕ ಇಂಜಿನಿಯರ್ (ಸಿವಿಲ್) (ವಿಭಾಗ 1) - 90 ಮತ್ತು ಸಹಾಯಕ ಇಂಜಿನಿಯರ್ (ಮೆಕ್ಯಾನಿಕಲ್) (ವಿಭಾಗ-1) 10 ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ B.Tech ಪದವಿಗಳನ್ನು ಪರಿಗಣಿಸಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಹಾಗೂ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಸಾಕಷ್ಟು ಕಾಲಾವಕಾಶ ನೀಡುವ ದೃಷ್ಟಿಯಿಂದ ಮೇಲ್ಕಂಡ ಅಧಿಸೂಚನೆಯಲ್ಲಿನ ವಿವಿಧ ಇಲಾಖೆಗಳ ಎಲ್ಲಾ ಗ್ರೂಪ್ "ಬಿ" ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವನ್ನು 24-05-2024ರವರೆಗೆ ವಿಸ್ತರಿಸಲಾಗಿದೆ. ಉಳಿದಂತೆ ದಿನಾಂಕ 13.03.2024ರ ಅಧಿಸೂಚನೆಯಲ್ಲಿನ ಇತರೆ ಷರತ್ತು / ಸೂಚನೆಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಸಹಿ/-
( ಜ್ಞಾನೇಂದ್ರ ಕುಮಾರ್ ಗಂಗ್ವಾರ್)
ಕಾರ್ಯದರ್ಶಿ (ಪ್ರ),
ಕರ್ನಾಟಕ ಲೋಕಸೇವಾ ಆಯೋಗ